RNU AIR DHARWAD

# SEPTEMBER 27, 2024

## AKASHAVANI - DHARWAD

## PRADESH SAMACHARA (KANNADA) 07.05 A.M.

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವರು: ಹರ್ಷವರ್ಧನ ಶೀಲವಂತ**

<><><>

**ಮುಖ್ಯಾಂಶಗಳು:**

<><><>

**ಮಹಾತ್ಮ ಗಾಂಧಿ ಸೇವಾ ಪ್ರಶಸ್ತಿ; ತುಮಕೂರಿನ ಜಿ.ಬಿ. ಶಿವರಾಜು ಹಾಗೂ ಹಾವೇರಿ ಜಿಲ್ಲೆ ಹೊಸರಿತ್ತಿಯ, ಗಾಂಧಿ ಗ್ರಾಮೀಣ ಗುರುಕುಲ ಶಾಲೆ, ಆಯ್ಕೆ.**

- **ರಾಜ್ಯದಲ್ಲಿ ಸಿ.ಬಿ.ಐ. ತನಿಖೆಗೆ, ರಾಜ್ಯ ಸರ್ಕಾರದ ಪೂರ್ವಾನುಮತಿ ಕಡ್ಡಾಯ – ಎಚ್.ಕೆ.ಪಾಟೀಲ, ಸ್ಪಷ್ಟನೆ.**
- **ರಾಯಚೂರು ಜಿಲ್ಲೆಯ, ಆಶೋತ್ತರ ತಾಲೂಕು ಸಿರವಾರದಲ್ಲಿ, ಸಂಪೂರ್ಣತಾ ಅಭಿಯಾನ, ಅಂತಿಮ ಹಂತಕ್ಕೆ.**
- **"ಪ್ರವಾಸೋದ್ಯಮ ಮತ್ತು ಶಾಂತಿ" ಧ್ಯೇಯದೊಂದಿಗೆ, ಇಂದು ವಿಶ್ವ ಪ್ರವಾಸೋದ್ಯಮ ದಿನಾಚರಣೆ.**

<><><>

**ಈಗ ವಾರ್ತೆಗಳ ವಿವರ**

<><><>

**ಮಹಾತ್ಮ ಗಾಂಧಿ ಸೇವಾ ಪ್ರಶಸ್ತಿಗೆ, ಹಿರಿಯ ಗಾಂಧಿವಾದಿ ತುಮಕೂರಿನ ಪ್ರೊಫೆಸರ್ ಜಿ.ಬಿ. ಶಿವರಾಜು ಹಾಗೂ ಹಾವೇರಿ ಜಿಲ್ಲೆ, ಹೊಸರಿತ್ತಿ ಗ್ರಾಮದ, ಶ್ರೀ ಗುದ್ಲೆಪ್ಪ ಹಳ್ಳಿಕೇರಿ ಸ್ಮಾರಕ ಪ್ರತಿಷ್ಠಾನದ, ಗಾಂಧಿ ಗ್ರಾಮೀಣ ಗುರುಕುಲ ವಸತಿ ಶಾಲೆ ಆಯ್ಕೆಯಾಗಿವೆ ಎಂದು, ವಾರ್ತಾ ಇಲಾಖೆಯ ಆಯುಕ್ತ ಹೇಮಂತ್ ನಿಂಬಾಳ್ಕರ್ ಪ್ರಕಟಿಸಿದ್ದಾರೆ. ಬಅಕ್ಟೋಬರ್ 2 ಗಾಂಧಿ ಜಯಂತಿಯಂದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಶಸ್ತಿಯನ್ನು ಪ್ರದಾನ ಮಾಡಲಿದ್ದಾರೆ. ಐದು ಲಕ್ಷ ರೂಪಾಯಿ ನಗದು ಪುರಸ್ಕಾರ ಒಳಗೊಂಡಿದೆ. ಹೊಸರಿತ್ತಿ ಗಾಂಧಿ ಗ್ರಾಮೀಣ ಗುರುಕುಲ ವಸತಿ ಶಾಲೆಯ ಮುಖ್ಯೋಪಾಧ್ಯಾಯ, ಎಂ.ಪಿ. ಗೌಡಣ್ಣನವರ ಪ್ರದೇಶ ಸಮಾಚಾರಕ್ಕಾಗಿ ಸಂತಸ ಹಂಚಿಕೊಂಡಿದ್ದಾರೆ.**

<><><>

**ಮುಖ್ಯೋಪಾಧ್ಯಾಯ, ಎಂ.ಪಿ. ಗೌಡಣ್ಣನವರ ಧ್ವನಿ 50 ಸೆಕೆಂದುಗಳು**

<><><>

**ರಾಜ್ಯದಲ್ಲಿ ಯಾವುದೇ ಪ್ರಕರಣಗಳ ಬಗ್ಗೆ, ಸಿಬಿಐ ತನಿಖೆ ನಡೆಸಬೇಕಾದರೆ, ರಾಜ್ಯ ಸರ್ಕಾರದ ಒಪ್ಪಿಗೆ ಪಡೆಯಬೇಕು ಎಂದು, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಖಾತೆ ಸಚಿವ ಎಚ್.ಕೆ.ಪಾಟೀಲ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸಚಿವ ಸಂಪುಟದ ಸಭೆಯ ಬಳಿಕ, ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಸಿಬಿಐ ತನಿಖೆಗೆ ರಾಜ್ಯದಲ್ಲಿ ಮುಕ್ತ**

ಅವಕಾಶ ಇದ್ದಿದ್ದನ್ನು ಹಿಂಪಡೆಯಲಾಗಿದೆ. ರಾಜ್ಯಪಾಲರ ಕಚೇರಿಯಿಂದ ಸರ್ಕಾರದ ಮುಖ್ಯ ಕಾರ್ಯದರ್ಶಿ ಅವರಿಗೆ ಅಥವಾ ಸರ್ಕಾರದ ಯಾವುದೇ ಅಧಿಕಾರಿಗೆ ಸ್ವೀಕೃತವಾಗುವ ಪತ್ರಗಳ ವಿಲೇವಾರಿ ಕೈಗೊಳ್ಳುವ ಮುನ್ನ, ಸಚಿವ ಸಂಪುಟದ ಗಮನಕ್ಕೆ ತರಬೇಕು. ಸಚಿವ ಸಂಪುಟ ಕೈಗೊಳ್ಳುವ ನಿರ್ಣಯದಂತೆ, ಮುಖ್ಯ ಕಾರ್ಯದರ್ಶಿ ಅವರು, ರಾಜಭವನಕ್ಕೆ ಮಾಹಿತಿ ನೀಡಬಹುದಾಗಿದೆ ಎಂದು ಸಚಿವರು ಸ್ಪಷ್ಟಪಡಿಸಿದರು. ಪಶ್ಚಿಮಘಟ್ಟಗಳ ಸಂರಕ್ಷಣೆ ಕುರಿತಾದ, ಕಸ್ತೂರಿರಂಗನ್ ವರದಿ ಅನುಷ್ಠಾನಗೊಳಿಸದಿರಲು, ರಾಜ್ಯ ಸರ್ಕಾರ ನಿರ್ಧರಿಸಿದೆ ಎಂದು, ಎಚ್.ಕೆ. ಪಾಟೀಲ ಹೇಳಿದರು.

<><><>

ದೇಶದ ತಜ್ಞರ ಜ್ಞಾನ ಹಾಗೂ ತಂತ್ರಜ್ಞಾನದ ನೂತನ ಆವಿಷ್ಕಾರಗಳನ್ನು, ಸೇತುವೆ ನಿರ್ಮಾಣದ ಹೊಸ ಯೋಜನೆಗಳಿಗೆ ಅಳವಡಿಸಿದಲ್ಲಿ, ಸಂಪರ್ಕ ವೃದ್ಧಿಸಿ, ದೇಶ ವೇಗ ಗತಿಯಲ್ಲಿ ಪ್ರಗತಿ ಹೊಂದಲು ಸಾಧ್ಯ ಎಂದು, ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಖಾತೆ ಸಚಿವ ನಿತಿನ್ ಗಡ್ಕರಿ ತಿಳಿಸಿದ್ದಾರೆ. ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಮಂತ್ರಾಲಯದ ಸಹಯೋಗದಲ್ಲಿ, ಬೆಂಗಳೂರಿನಲ್ಲಿ ಆಯೋಜಿಸಲಾದ, 'ಅಭಿವೃದ್ಧಿಶೀಲ ಸೇತುವೆ ನಿರ್ವಹಣೆ' ಕುರಿತ, 2 ದಿನಗಳ ಅಂತಾರಾಷ್ಟ್ರೀಯ ಸಮ್ಮೇಳನವನ್ನು, ಉದ್ಘಾಟಿಸಿ ಅವರು ಮಾತನಾಡಿದರು. ಲೋಕೋಪಯೋಗಿ ಖಾತೆ ಸಚಿವ ಸತೀಶ್ ಜಾರಕಿಹೊಳಿ ಮಾತನಾಡಿ, ರಾಜ್ಯದ ಪಶ್ಚಿಮಘಟ್ಟದ ವ್ಯಾಪ್ತಿಯಲ್ಲಿ, ಬಹಳಷ್ಟು ಸೇತುವೆಗಳು ನೆಲಸಮಗೊಂಡಿವೆ. ಗುಡ್ಡ ಕುಸಿತದ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಬೇಕಿದೆ ಎಂದರು.

<><><>

ಕೃಷಿ ಮತ್ತು ತೋಟಗಾರಿಕೆ ಬೆಳೆಗಳಿಗೆ, ಬೆಂಬಲ ಬೆಲೆ ನಿಗದಿಪಡಿಸುವ ಸಮಿತಿ ಸಭೆ, ಬೆಂಗಳೂರಿನಲ್ಲಿ ನಡೆಯಿತು. ಕೃಷಿ ಖಾತೆ ಸಚಿವ ಎನ್.ಚಲುವರಾಯಸ್ವಾಮಿ ಅವರ ಅಧ್ಯಕ್ಷತೆಯಲ್ಲಿ, ವಿಧಾನಸೌಧದ ಕೊಠಡಿಯಲ್ಲಿ ನಡೆದ ಸಭೆಯಲ್ಲಿ, ಪ್ರಸಕ್ತ ಸಾಲಿಗೆ ಬೆಂಬಲ ಬೆಲೆಯೊಂದಿಗೆ, ಆಹಾರ ಧಾನ್ಯ ಖರೀದಿಸಲು, ಆವರ್ತ ನಿಧಿಯಿಂದ ಹಣ ಬಿಡುಗಡೆ ಮಾಡುವ ಕುರಿತು ಚರ್ಚೆ ನಡೆಯಿತು.

<><><>

44ನೇ ರಾಜ್ಯ ಮಟ್ಟದ, ಕಬ್ಸ್ ಮತ್ತು ಬುಲ್‌ಬುಲ್ಸ್ ಉತ್ಸವ, ಚಿಕ್ಕಮಗಳೂರು ನಗರದಲ್ಲಿ, ಅಕ್ಟೋಬರ್ 5 ರಿಂದ 9 ರ ವರೆಗೆ ಆಯೋಜಿತವಾಗಿದೆ ಎಂದು, ಭಾರತ ಸ್ಕೌಟ್ಸ್ ಆಂಡ್ ಗೈಡ್ಸ್, ರಾಜ್ಯ ಉಪಾಧ್ಯಕ್ಷ ಎ.ಎನ್ ಮಹೇಶ್ ತಿಳಿಸಿದ್ದಾರೆ. ಚಿಕ್ಕಮಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆದಿಚುಂಚನಗಿರಿ ಮಂಜುನಾಥೇಶ್ವರ ಶಿಕ್ಷಣ ಸಂಸ್ಥೆಯ ಆವರಣದಲ್ಲಿ, ಐದು ದಿನಗಳ ಉತ್ಸವ ನಡೆಯಲಿದೆ. ವಿವಿಧ ಜಿಲ್ಲೆಗಳಿಂದ 6 ರಿಂದ 10 ವರ್ಷದೊಳಗಿನ, ಸಾವಿರದ 500 ಬಾಲಕ, ಬಾಲಕಿಯರು ಹಾಗೂ 300 ಜನ ನಾಯಕರು ಆಗಮಿಸಲಿದ್ದಾರೆ ಎಂದರು.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಮಹತ್ವಾಕಾಂಕ್ಷಿ ರಾಯಚೂರು ಜಿಲ್ಲೆಯ, ಆಶೋತ್ತರ ತಾಲೂಕು ಸಿರವಾರದಲ್ಲಿ 6 ಸೂಚ್ಯಂಕಗಳಡಿ, ಸಂಪೂರ್ಣತಾ ಅಭಿಯಾನ ಕಳೆದ 86 ದಿನಗಳಿಂದ ಚಾಲ್ತಿಯಲ್ಲಿದೆ. ತಾಲೂಕಿನ ಜನರ ಜೀವನ ಮಟ್ಟವನ್ನು ಉನ್ನತೀಕರಿಸಲು, ಅಭಿವೃದ್ಧಿ ಸಾಧಿಸಲಾಗುತ್ತಿದೆ. ಪ್ರದೇಶ ಸಮಾಚಾರಕ್ಕೆ ಮಾಹಿತಿಗಾಗಿ ನೀಡಿದ್ದಾರೆ, ಸಿರವಾರ ಘಟಕದ, ಫೆಲೋ ಡಾಕ್ಟರ್ ಜ್ಞಾನಸುಂದರಿ.

<><><>

ಫೆಲೋ ಡಾಕ್ಟರ್ ಜ್ಞಾನಸುಂದರಿ ಧ್ವನಿ 56 ಸೆಕೆಂದುಗಳು

<><><>

"ಪ್ರವಾಸೋದ್ಯಮ ಮತ್ತು ಶಾಂತಿ" ಧ್ಯೇಯದೊಂದಿಗೆ, ಇಂದು ವಿಶ್ವ ಪ್ರವಾಸೋದ್ಯಮ ದಿನ ಆಚರಿಸಲಾಗುತ್ತಿದೆ. ಸಮಾಜ, ಸಂಸ್ಕೃತಿ, ಆರ್ಥಿಕತೆ ಮತ್ತು ಪರಿಸರದಲ್ಲಿ, ಪ್ರವಾಸೋದ್ಯಮದ ಮಹತ್ವ ಕುರಿತು, ಜಾಗೃತಿ ಮೂಡಿಸುವ ಗುರಿಯೊಂದಿಗೆ, ಇಂದು, ಸಾಂಸ್ಕೃತಿಕ ವಿನಿಮಯ ಮತ್ತು ಪ್ರಯಾಣದಿಂದ ಲಭಿಸುವ, ಆರ್ಥಿಕ ಅಭಿವೃದ್ಧಿಯನ್ನು ಒತ್ತಿ ಹೇಳುವ ದಿನವಾಗಿ, ವಾರ್ಷಿಕ ಜಾಗತಿಕ ಆಚರಣೆ ಆಯೋಜಿಸಲಾಗಿದೆ. ಸುಸ್ಥಿರ ಪ್ರವಾಸೋದ್ಯಮ, ಉದ್ಯೋಗಗಳನ್ನು ಸೃಷ್ಟಿಸಿ, ಎಲ್ಲರ ಒಳಗೊಳ್ಳುವಿಕೆಯನ್ನು ಉತ್ತೇಜಿಸುವ ಮತ್ತು ಸ್ಥಳೀಯ ಆರ್ಥಿಕತೆಯನ್ನು ಬಲಪಡಿಸುವ ಮೂಲಕ, ಸಮುದಾಯಗಳನ್ನು ಪರಿವರ್ತಿಸುವ ಶಕ್ತಿಯನ್ನು ಹೊಂದಿದೆ ಎಂದು, ಪ್ರಚುರ ಪಡಿಸಲಾಗುತ್ತಿದೆ.

<><><>

ವಿಜಯನಗರ ಜಿಲ್ಲೆಯ, ಐತಿಹಾಸಿಕ ಹಂಪಿಯಲ್ಲಿ, ವಿಶ್ವ ಪ್ರವಾಸೋದ್ಯಮ ದಿನಾಚರಣೆ ಪೂರ್ವಭಾವಿಯಾಗಿ, 'ಶಾಂತಿಗಾಗಿ ಪಾರಂಪರಿಕ ನಡಿಗೆ' ಕಾರ್ಯಕ್ರಮಕ್ಕೆ, ಜಿಲ್ಲಾಧಿಕಾರಿ ಎಂ.ಎಸ್. ದಿವಾಕರ ಚಾಲನೆ ನೀಡಿದರು.

<><><>

ವಿಶ್ವ ಪ್ರವಾಸೋದ್ಯಮ ದಿನಾಚರಣೆ ಪ್ರಯುಕ್ತ, ಇಂದು, ಚಿಕ್ಕಬಳ್ಳಾಪುರ ಜಿಲ್ಲೆಯ ನಂದಿ ಗಿರಿಧಾಮದಲ್ಲಿ ಪರಿಸರಸ್ನೇಹಿ ಪ್ರವಾಸೋದ್ಯಮ ದಿನಾಚರಣೆ ಕುರಿತ, ವಿಶೇಷ ಕಾರ್ಯಕ್ರಮ ಜರುಗಲಿದೆ.

<><><>

ಮರಗಳನ್ನೇ ಮಕ್ಕಳೆಂದು ಭಾವಿಸಿ, ನೆಟ್ಟು ಬೆಳೆಸುವ ಮೂಲಕ, ಮನುಕುಲವನ್ನು ರಕ್ಷಿಸುವ ಬಹು ದೊಡ್ಡ ಕೆಲಸವನ್ನು, ಪದ್ಮಶ್ರೀ ಪುರಸ್ಕೃತ ಸಾಲು ಮರದ ತಿಮ್ಮಕ್ಕನವರು ಮಾಡಿದ್ದಾರೆ ಎಂದು, ಗೃಹ ಖಾತೆ ಸಚಿವ ಡಾಕ್ಟರ್ ಜಿ.ಪರಮೇಶ್ವರ ತಿಳಿಸಿದ್ದಾರೆ. ಬೆಂಗಳೂರಿನ ಡಾಕ್ಟರ್ ಬಿ.ಆರ್.ಅಂಬೇಡ್ಕರ್ ಭವನದಲ್ಲಿ ನಡೆದ, ವೃಕ್ಷ ಮಾತೆ, ಸಾಲು ಮರದ ತಿಮ್ಮಕ್ಕ ಅವರ, 113ನೇ ಜನ್ಮ ದಿನದ ಸಂಭ್ರಮ ಹಾಗೂ ಸಾಲು ಮರದ ತಿಮ್ಮಕ್ಕ 'ನ್ಯಾಷನಲ್ ಗ್ರೀನರಿ ಅವಾರ್ಡ್' ಸಮಾರಂಭದಲ್ಲಿ, ಅವರು ಮಾತನಾಡಿದರು.

<><><>

ಚಿಕ್ಕಬಳ್ಳಾಪುರ ಜಿಲ್ಲೆಯ ನಂದಿ ಗಿರಿಧಾಮದಲ್ಲಿ, 'ರೋಪ್ ವೇ' ನಿರ್ಮಿಸುವ ಯೋಜನೆಗೆ, ಪ್ರವಾಸೋದ್ಯಮ ಇಲಾಖೆಗೆ ಅಗತ್ಯವಿದ್ದ, ಎರಡು ಎಕರೆ ಭೂಮಿ ತೋಟಗಾರಿಕೆ ಇಲಾಖೆಯಿಂದ ಮಂಜೂರಾಗಿದೆ. ಜಿಲ್ಲಾ ಉಸ್ತುವಾರಿ ಸಚಿವ ಎಂ.ಸಿ. ಸುಧಾಕರ್ ಪ್ರಕಟಣೆಯಲ್ಲಿ ಈ ವಿಷಯ ತಿಳಿಸಿದ್ದು, 'ರೋಪ್ ವೇ' ನಿರ್ಮಿಸಲು, ಶೀಘ್ರ ಎಲ್ಲ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದಿದ್ದಾರೆ.

<><><>

ಸ್ಟುಡೆಂಟ್ಸ್ ಫೆಡರೇಷನ್ ಆಫ್ ಇಂಡಿಯಾ – ಎಸ್.ಎಫ್.ಐ., ಚಿಕ್ಕಬಳ್ಳಾಪುರದಲ್ಲಿ ಆಯೋಜಿತ, 16ನೇ ರಾಜ್ಯ ಸಮ್ಮೇಳನಕ್ಕೆ, ರಾಜ್ಯ ಜಾನಪದ ಅಕಾದೆಮಿ ಅಧ್ಯಕ್ಷ ಗೊಲ್ಲಹಳ್ಳಿ ಶಿವಪ್ರಸಾದ್ ಹಾಗೂ ಪದ್ಮಶ್ರೀ ಪುರಸ್ಕೃತ ತಮಟೆ ಕಲಾವಿದ, ಪಿಂಡಿಪಾಪನಹಳ್ಳಿ ಮುನಿವೆಂಕಟಪ್ಪ ಚಾಲನೆ ನೀಡಿದರು. ವಿವಿಧ ಜಿಲ್ಲೆಗಳಿಂದ ಸಮ್ಮೇಳನಕ್ಕೆ ಆಗಮಿಸಿದ, ಸಾವಿರಾರು ವಿದ್ಯಾರ್ಥಿಗಳು ಶಿಕ್ಷಣ, ಸಮಾನತೆಯ ಘೋ 'ಣೆಗಳೊಂದಿಗೆ, ಒಕ್ಕಲಿಗರ ಕಲ್ಯಾಣ ಮಂಟಪದ ಮುಂಭಾಗದಿಂದ ಸಮ್ಮೇಳನ ಸಭಾಂಗಣದ ವೇದಿಕೆಯ ವರೆಗೂ ಮೆರವಣಿಗೆ ನಡೆಸಿದರು.

<><><>

ಬಿಹಾರದ ಪಟ್ನಾದಲ್ಲಿ, ನಾಳೆಯಿಂದ 30ರ ವರೆಗೆ ಆಯೋಜಿತ, 23 ವರ್ಷ ವಯೋಮಿತಿಯೊಳಗಿನ, 4ನೇ ರಾಷ್ಟ್ರೀಯ ಮುಕ್ತ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್ ಸ್ಪರ್ಧೆಯಲ್ಲಿ, ಶಿವಮೊಗ್ಗದ ಸುದೀಪ್, ಎತ್ತರ ಜಿಗಿತ ಸ್ಪರ್ಧೆಯಲ್ಲಿ ಭಾಗವಹಿಸಿ, ರಾಜ್ಯವನ್ನು ಪ್ರತಿನಿಧಿಸಲಿದ್ದಾರೆ. ತರಬೇತುದಾರ ಬಾಳಪ್ಪ ಮಾನೆ, ಸುದೀಪ್ ಅವರಿಗೆ ಮಾರ್ಗದರ್ಶನ ಮಾಡಿದ್ದಾರೆ.

<><><>

ಈಗ ಸಂಕ್ಷಿಪ್ತ ಸುದ್ದಿಗಳು:

<><><>

ಪುಣೆಯ ಭಾರತ ಗಾಯನ ಸಮಾಜ ನೀಡುವ, ಪದ್ಮಶ್ರೀ ಮಾಣಿಕ್ ವರ್ಮ ಪ್ರಶಸ್ತಿ, ಧಾರವಾಡದ ವಿದುಷಿ ಸುಜಾತಾ ಗುರವ ಅವರಿಗೆ ಸಂದಿದೆ.

<><><>

ಹುಬ್ಬಳ್ಳಿಯ ಸರ್ಕಾರಿ ಪಾಲಿಟೆಕ್ನಿಕ್‌ನಲ್ಲಿ, ವಿದ್ಯಾರ್ಥಿ ಸಂಘದ ಉದ್ಘಾಟನಾ ಸಮಾರಂಭ ಇಂದು ಬೆಳಗ್ಗೆ 10 ಗಂಟೆಗೆ, ಹೊಸ ಸಭಾಂಗಣದಲ್ಲಿ ಜರುಗಲಿದೆ. ಹುಬ್ಬಳ್ಳಿ–ಧಾರವಾಡ ಪೊಲೀಸ್ ಆಯುಕ್ತ ಎನ್.ಶಶಿಕುಮಾರ್ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ.

<><><>

ಕೇಂದ್ರ ಸಾಹಿತ್ಯ ಅಕಾದೆಮಿ, ಲೇಖಕರೊಂದಿಗೆ ಭೇಟಿ ಕಾರ್ಯಕ್ರಮದಲ್ಲಿ, ಧಾರವಾಡದ ಲೇಖಕಿ ಮಾಲತಿ ಪಟ್ಟಣಶೆಟ್ಟಿ ಅವರು, ಭಾನುವಾರ 29ನೇ ತಾರೀಖು ಬೆಳಗ್ಗೆ 10 ಗಂಟೆಗೆ, ಕರ್ನಾಟಕ ವಿದ್ಯಾವರ್ಧಕ ಸಂಘದಲ್ಲಿ ತಮ್ಮ ವಿಚಾರಗಳನ್ನು ಹಂಚಿಕೊಳ್ಳಲಿದ್ದಾರೆ.

<><><>

ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ಸೌಲಭ್ಯ ನೀಡಲು, ಮುಖ್ಯಮಂತ್ರಿ ಸಿದ್ದರಾಮಯ್ಯ ಆದೇಶಿಸಿದ್ದಾರೆ.

<><><>

ಕುಲಾಂತರಿ ತಳಿಗಳನ್ನು ನಿ ೀಧಿಸುವಂತೆ, ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಕಾರ್ಯಕರ್ತರು, ಚಿಕ್ಕಬಳ್ಳಾಪುರ ಜಿಲ್ಲಾಡಳಿತ ಭವನದ ಎದುರು ಪ್ರತಿಭಟಿಸಿದರು.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

<><><>

- ಮಹಾತ್ಮ ಗಾಂಧಿ ಸೇವಾ ಪ್ರಶಸ್ತಿ: ತುಮಕೂರಿನ ಜಿ.ಬಿ. ಶಿವರಾಜು ಹಾಗೂ ಹಾವೇರಿ ಜಿಲ್ಲೆ ಹೊಸರಿತ್ತಿಯ, ಗಾಂಧಿ ಗ್ರಾಮೀಣ ಗುರುಕುಲ ಶಾಲೆ, ಆಯ್ಕೆ.
- ರಾಜ್ಯದಲ್ಲಿ ಸಿ.ಬಿ.ಐ. ತನಿಖೆಗೆ, ರಾಜ್ಯ ಸರ್ಕಾರದ ಪೂರ್ವಾನುಮತಿ ಕಡ್ಡಾಯ – ಎಚ್.ಕೆ.ಪಾಟೀಲ, ಸ್ಪಷ್ಟನೆ.
- ರಾಯಚೂರು ಜಿಲ್ಲೆಯ, ಆಶೋತ್ತರ ತಾಲೂಕು ಸಿರವಾರದಲ್ಲಿ, ಸಂಪೂರ್ಣತಾ ಅಭಿಯಾನ, ಅಂತಿಮ ಹಂತಕ್ಕೆ.
- “ಪ್ರವಾಸೋದ್ಯಮ ಮತ್ತು ಶಾಂತಿ” ಧ್ಯೇಯದೊಂದಿಗೆ, ಇಂದು ವಿಶ್ವ ಪ್ರವಾಸೋದ್ಯಮ ದಿನಾಚರಣೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಈ ಬೆಳಗ್ಗೆ 7 ಗಂಟೆ 35 ನಿಮಿಷಕ್ಕೆ.

<><><>

ಹರ್ಷ